# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1) | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 792 |
| 2) | ಮಾನ್ಯ ಸದಸ್ಯರ ಹೆಸರು | ಶ್ರೀ ಡಿ.ಟಿ.ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) |
| 3) | ಉತ್ತರಿಸಬೇಕಾದ ದಿನಾಂಕ | 18/08/2025 |
| 4) | ಉತ್ತರಿಸುವ ಸಚಿವರು | ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಸಚಿವರು. |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಖಾಸಗಿ ಐ.ಟಿ.ಐ.ಗಳಲ್ಲಿ ತರಬೇತಿ ಪಡೆಯುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳ ವಿದ್ಯಾರ್ಥಿ ವೇತನದ ಹೆಚ್ಚಳದ ಬಗ್ಗೆ ಸರ್ಕಾರ ಕ್ರಮ ಕೈಗೊಂಡಿದೆಯೇ; ಕೈಗೊಂಡಿದ್ದಲ್ಲಿ ವಿವರಗಳೇನು; | ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯು ಕೇಂದ್ರ ಸರ್ಕಾರದ ಸಹಯೋಗದೊಂದಿಗೆ ಕೇಂದ್ರ ಪುರಸ್ಕೃತ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸುತ್ತಿದ್ದು, ಸದರಿ ಕಾರ್ಯಕ್ರಮದಡಿ 2023-24ನೇ ಸಾಲಿನಿಂದ ಐ.ಟಿ.ಐ ಕೋರ್ಸುಗಳಲ್ಲಿ ಒದುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ರೂ. 5000/-ಗಳಂತೆ ವಿದ್ಯಾರ್ಥಿ ವೇತನ ದರಗಳನ್ನು ಹೆಚ್ಚಿಸಿ ಆದೇಶಿಸಲಾಗಿರುತ್ತದೆ. ಅದರಂತೆ ಕಳೆದ 2 ವರ್ಷಗಳಲ್ಲಿ ಐ.ಟಿ.ಐ ಕೋರ್ಸುಗಳಲ್ಲಿ ಒದುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಈ ಕೆಳಕಂಡಂತೆ ವಿದ್ಯಾರ್ಥಿ ವೇತನ ಪಾವತಿಸಲಾಗಿರುತ್ತದೆ.<br>(ರೂ.ಕೋಟಿಗಳಲ್ಲಿ)<br>**ಆರ್ಥಿಕ ವರ್ಷ** / **ಪಾವತಿಯಾದ ವಿದ್ಯಾರ್ಥಿಗಳ ಸಂಖ್ಯೆ** / **ಪಾವತಿ ಮಾಡಲಾದ ಮೊತ್ತ**<br>2023-24 / 3638 / 1.81<br>2024-25 / 1794 / 0.89 |
| ಆ) | ಸರ್ಕಾರಿ ಮತ್ತು ಖಾಸಗಿ ಐ.ಟಿ.ಐ.ಗಳಲ್ಲಿ ತರಬೇತಿ ಪಡೆಯುತ್ತಿರುವ ಎಸ್.ಸಿ ಮತ್ತು ಎಸ್.ಟಿ ವಿದ್ಯಾರ್ಥಿಗಳಿಗೆ ಸರ್ಕಾರದಿಂದ ನೀಡುವ ಪರಿಕರಗಳನ್ನು ಸಕಾಲದಲ್ಲಿ ಒದಗಿಸಲಾಗುತ್ತಿದೆಯೇ; ಇದ್ದಲ್ಲಿ ಯಾವ ಯಾವ ಸೌಲಭ್ಯಗಳನ್ನು ನೀಡಲಾಗುತ್ತಿದೆ; ಮಾಹಿತಿ ನೀಡುವುದು; | ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಐ.ಟಿ.ಐ ಗಳಲ್ಲಿ ತರಬೇತಿ ಪಡೆಯುತ್ತಿರುವ ಎಸ್.ಸಿ ಮತ್ತು ಎಸ್.ಟಿ ವಿದ್ಯಾರ್ಥಿಗಳಿಗೆ ಸಮಾಜ ಕಲ್ಯಾಣ ಇಲಾಖೆಯ ರಾಜ್ಯ ಅಭಿವೃದ್ಧಿ ಪರಿಷತ್ತಿನ ಕ್ರಿಯಾ ಯೋಜನೆಯ ಅನುಮೋದನೆ ಮತ್ತು ಅನುದಾನದ ಹಂಚಿಕೆಯಂತೆ ಕಾಲ ಕಾಲಕ್ಕೆ ಪರಿಕರಗಳನ್ನು ಒದಗಿಸಲಾಗುತ್ತಿದೆ. ಪ್ರಸ್ತುತ ಟೂಲ್‌ಕಿಟ್‌ಗಳನ್ನು ಖರೀದಿಸಿ ಉಚಿತವಾಗಿ ವಿತರಣೆ ಮಾಡಲಾಗುತ್ತಿದೆ. |
| ಇ) | ರಾಜ್ಯದಲ್ಲಿರುವ ಖಾಸಗಿ ಐ.ಟಿ.ಐ.ಗಳಲ್ಲಿ ತರಬೇತಿ ಪಡೆಯುತ್ತಿರುವ ವಿದ್ಯಾರ್ಥಿಗಳ ಅಖಿಲ ಭಾರತ ವೃತ್ತಿ ಪರೀಕ್ಷೆಯ (AITT) ಪ್ರಾಯೋಗಿಕ ಪರೀಕ್ಷೆಯ ಪರೀಕ್ಷಾ ಶುಲ್ಕವನ್ನು ಪಾವತಿಸಲು ಸರ್ಕಾರ Online ನಲ್ಲಿ ಅವಕಾಶ ಕಲ್ಪಿಸಿದೆಯೇ? | ಪ್ರಾಯೋಗಿಕ ಪರೀಕ್ಷೆಯ ಪರೀಕ್ಷಾ ಶುಲ್ಕವನ್ನು ಪ್ರಸ್ತುತ OFFLINE ಮೂಲಕ ಪಾವತಿಸಿಕೊಳ್ಳಲಾಗುತ್ತಿದೆ. |

**ಸಂಖ್ಯೆ: ಕೌಉಜೀಇ 76 ಕೈತಪ್ರ 2025**

(ಡಾ. ಶರಣಪ್ರಕಾಶ ಆರ್ ಪಾಟೀಲ್)
ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ,
ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು.